ಆ) ಅಮ್ಮಸಂದ್ರದಿಂದ ಬಿ.ಎಚ್ ರಸ್ತೆ ಕೂಡುವ ರಸ್ತೆ ಅಭಿವೃದ್ಧಿ ಕಾಮಗಾರಿಯ ಟೆಂಡರ್ ಪ್ರಕ್ರಿಯೆ ನಡೆದಿದೆ. ಉಳಿದ ಕಾಮಗಾರಿಗಳಿಗೆ ನಬಾರ್ಡ್‌ನಿಂದ ಅನುಮೋದನೆ ದೊರೆತ ನಂತರ ಕೈಗೆತ್ತಿಕೊಳ್ಳಲಾಗುವುದು.

ಇ) ಟೆಂಡರ್ ಪ್ರಕ್ರಿಯೆ ಇತ್ಯರ್ಥವಾದ ನಂತರ ಕಾಮಗಾರಿ ಪ್ರಾರಂಭಿಸಲಾಗುವುದು.

ಈ) ಕರ್ನಾಟಕ ಕ್ರಷರ್ಸ್, ಬೆಂಗಳೂರು ರವರು ಕನಿಷ್ಟ ದರವನ್ನು ನಮೂದಿಸಿದ್ದು, ಟೆಂಡರ್ ಪ್ರಸ್ತಾವನೆ ಅನುಮೋದನೆಯಾದ ನಂತರ ಕಾಮಗಾರಿಯನ್ನು ಕಾರ್ಯಗತಗೊಳಿಸಲಾಗುತ್ತದೆ.

ಶಿಕಾರಿಪುರ ತಾಲ್ಲೂಕಿನಲ್ಲಿ ಕುಡಿಯುವ ನೀರಿನ ವ್ಯವಸ್ಥೆ

2043(2015) ಶ್ರೀ ಮಹಾಲಿಂಗಪ್ಪ ಬಿ.ಎನ್ (ಶಿಕಾರಿಪುರ): ಮಾನ್ಯ ಗ್ರಾಮೀಣ ನೀರು ಸರಬರಾಜು ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಆ) ಶಿಕಾರಿಪುರ ತಾಲ್ಲೂಕಿನ ಹತ್ಲ, ಸಾಲೂರು, ಹುಣಸೆಕಟ್ಟೆ, ಕೊರಟಗೆರೆ ಗ್ರಾಮಗಳಲ್ಲಿ ಕುಡಿಯುವ ನೀರು ತೊಂದರೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಮೇಲ್ಕಂಡ ಗ್ರಾಮಗಳಿಗೆ ಕುಡಿಯುವ ನೀರಿನ ವ್ಯವಸ್ಥೆಯ ಬಗ್ಗೆ ತಯಾರಿಸಿದ ಯೋಜನೆಗಳು ಯಾವ ಹಂತದಲ್ಲಿವೆ;

ಇ) ಈ ಯೋಜನೆಗಳನ್ನು ಮಂಜೂರು ಮಾಡಲು ಕೈಗೊಂಡಿರುವ ಕ್ರಮವೇನು?

ಶ್ರೀ ಕೆ.ಬಿ. ಕೋಳಿವಾಡ (ಗ್ರಾಮೀಣ ನೀರು ಸರಬರಾಜು ರಾಜ್ಯ ಸಚಿವರು):

ಆ) ಶಿಕಾರಿಪುರ ತಾಲ್ಲೂಕಿನ ಹತ್ಲ, ಸಾಲೂರು, ಹುಣಸೇಕಟ್ಟೆ, ಕೊರಟಗೆರೆ ಗ್ರಾಮಗಳಲ್ಲಿ ಜನಸಾಂದ್ರತೆ ಆಧರಿಸಿ, ಸಮರ್ಪಕ ಕುಡಿಯುವ ನೀರಿನ ವ್ಯವಸ್ಥೆ ಕಲ್ಪಿಸಲು ಆಗತ್ಯ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲು ಸರ್ಕಾರಕ್ಕೆ ಪ್ರಸ್ತಾವನೆ ಬಂದಿದೆ.

ಆ) ಮತ್ತು ಇ) ಸದರಿ ಯೋಜನೆಗಳಿಗೆ ಮಂಜೂರಾತಿ ನೀಡುವ ವಿಷಯ ಸರ್ಕಾರದ ಪರಿಶೀಲನೆಯಲ್ಲಿದೆ.

ಯಳಂದೂರು ಗ್ರಾಮಾಂತರ ಪ್ರದೇಶದಲ್ಲಿ ಪ್ರೌಢಶಾಲೆಯ ಕೊರತೆ

2044(2183) ಶ್ರೀ ಜಿ.ಎನ್.ನಂಜುಂಡಸ್ವಾಮಿ (ಕೊಳ್ಳೇಗಾಲ) : ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಆ) ಯಳಂದೂರು ತಾಲ್ಲೂಕಿನ ಗ್ರಾಮಾಂತರ ಪ್ರದೇಶದಲ್ಲಿ ಪ್ರೌಢಶಾಲೆಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ;

ಆ) ಹಾಗಿದ್ದಲ್ಲಿ ಯಳಂದೂರು ಗ್ರಾಮಾಂತರ ಪ್ರದೇಶದಲ್ಲಿ ಪ್ರೌಢಶಾಲೆ ತೆರೆಯಲು ಸರಕಾರ ಕ್ರಮ ಕೈಗೊಳ್ಳುವುದೇ?

ಪ್ರೊ।। ಬಿ.ಕೆ. ಚಂದ್ರಶೇಖರ್ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು):

ಆ) ಈ ಕುರಿತು ಸರ್ಕಾರದಲ್ಲಿ ಪ್ರಸ್ತಾವನೆ ಇರುವುದಿಲ್ಲ.

ಆ) ಈ ಪ್ರಶ್ನೆ ಉದ್ಭವಿಸುವುದಿಲ್ಲ.

ಕೊಳ್ಳೇಗಾಲ ಸಾರ್ವಜನಿಕ ಆಸ್ಪತ್ರೆಯಲ್ಲಿ ಹೋಮಿಯೋಪತಿ ವಿಭಾಗ ತೆರೆಯುವುದು

2045(2434) ಶ್ರೀ ನಂಜುಂಡಸ್ವಾಮಿ ಜಿ.ಎನ್(ಕೊಳ್ಳೇಗಾಲ) : ಮಾನ್ಯ ವಿಜ್ಞಾನ ಮತ್ತು ತಂತ್ರಜ್ಞಾನ ಹಾಗೂ ಭಾರತೀಯ ವೈದ್ಯ ಪದ್ಧತಿ ಮತ್ತು ಹೋಮಿಯೋಪತಿ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?